**ಕರ್ನಾಟಕ ವಿಧಾನ ಪರಿಷತ್ತು**

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 328 |
| ವಿಧಾನ ಪರಿಷತ್ ಸದಸ್ಯರ ಹೆಸರು | ಶ್ರೀ ಪ್ರಕಾಶ್.ಕೆ.ರಾಥೋಡ್ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | 23-09-2020 |
| ಉತ್ತರಿಸುವ ಸಚಿವರು | ಕೃಷಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ 3 ವರ್ಷಗಳಿಂದ ವಿಜಯಪುರ ಜಿಲ್ಲೆಯಲ್ಲಿ ಕೃಷಿ ಇಲಾಖೆಯಿಂದ ರೈತರಿಗೆ ಯಾವ ಯಾವ ಕೃಷಿ ಉಪಕರಣಗಳನ್ನು ನೀಡಲಾಗಿದೆ; (ವಿವರ ನೀಡುವುದು) | ಕಳೆದ 3 ವರ್ಷಗಳಿಂದ ವಿಜಯಪುರ ಜಿಲ್ಲೆಯಲ್ಲಿ ಕೃಷಿ ಇಲಾಖೆಯಿಂದ ಸಣ್ಣ ಟ್ರ್ಯಾಕ್ಟರ್, ಪವರ್ ಟಿಲ್ಲರ್, ಭೂಮಿ ಸಿದ್ದತೆ ಉಪಕರಣಗಳು, ಬಿತ್ತನೆ ಉಪಕರಣಗಳು, ಕೊಯಿಲು ಒಕ್ಕಲು ಮಾಡುವ ಉಪಕರಣಗಳು, ತ್ಯಾಜ್ಯ ವಸ್ತುಗಳ ನಿರ್ವಹಣೆ ಉಪಕರಣಗಳು, ಅಂತರ ಬೇಸಾಯ ಮಾಡುವ ಉಪಕರಣಗಳು, ಸಸ್ಯ ಸಂರಕ್ಷಣಾ ಉಪಕರಣಗಳು, ಡೀಸೆಲ್ ಪಂಪ್‌ಸೆಟ್ ಮತ್ತು ಕಬ್ಬು ಕಟಾವು ಯಂತ್ರಗಳನ್ನು ರೈತರಿಗೆ ನೀಡಲಾಗಿರುತ್ತದೆ. |
| ಆ) | ರೈತರಿಗೆ ಕೃಷಿ ಇಲಾಖೆಯಿಂದ ಯಾವ ಯಾವ ಸೌಲಭ್ಯವನ್ನು ನೀಡಲಾಗುತ್ತಿದೆ (ವಿವರ ನೀಡುವುದು) | ರೈತರಿಗೆ ಕೃಷಿ ಇಲಾಖೆಯಿಂದ ವಿವಿಧ ಯೋಜನೆಗಳಡಿ ನೀಡಲಾಗುತ್ತಿರುವ ಸೌಲಭ್ಯಗಳ ವಿವರಗಳನ್ನು ಅನುಬಂಧ-1 ರಲ್ಲಿ ಮತ್ತು ಜಲಾನಯನ ಅಭಿವೃದ್ಧಿ ಇಲಾಖೆಯಿಂದ ರೈತರಿಗೆ ಪ್ರಸ್ತುತ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳ ವಿವರಗಳನ್ನು ಅನುಬಂಧ-2 ರಲ್ಲಿ ನೀಡಿದೆ. |

ಸಂಖ್ಯೆ: AGRI-ASC-42/2020

(ಬಿ.ಸಿ.ಪಾಟೀಲ್)
ಕೃಷಿ ಸಚಿವರು

## ವಿಧಾನ ಪರಿಷತ್ತಿನ ಪ್ರಶ್ನೆ ಸಂಖ್ಯೆ 328ಕ್ಕೆ ಅನುಬಂಧ-1

### ಕೃಷಿ ಇಲಾಖೆಯ ವಿವಿಧ ಯೋಜನೆಗಳಡಿ ನೀಡಲಾಗುತ್ತಿರುವ ಸೌಲಭ್ಯಗಳ ವಿವರಗಳು

1) **ರಾಷ್ಟ್ರೀಯ ಆಹಾರ ಸುರಕ್ಷತಾ ಅಭಿಯಾನ:** ಭತ್ತ, ದ್ವಿದಳಧಾನ್ಯ, ನ್ಯೂಟ್ರಿ ಸಿರಿಧಾನ್ಯ ಉತ್ಪಾದನೆಗೆ ಬಿತ್ತನೆ ಬೀಜ, ಲಘು ಪೋಷಕಾಂಶಗಳು, ಜೈವಿಕ ಗೊಬ್ಬರಗಳು, ಸಸ್ಯ ಸಂರಕ್ಷಣಾ ರಾಸಾಯನಿಕಗಳು, ಜಿಪ್ಸಂ/ ಕೃಷಿ ಸುಣ್ಣ, ಕೃಷಿ ಉಪಕರಣಗಳು, ನೀರು ಹರಿಸುವ ಪೈಪು, ತುಂತುರು ನೀರಾವರಿ ಘಟಕಗಳ ಅಳವಡಿಕೆಗೆ ಶೇ.50ರ ಸಹಾಯಧನವನ್ನು ನೀಡಲಾಗುತ್ತದೆ. ಇದಲ್ಲದೆ, ದೃಢೀಕೃತ ಬಿತ್ತನೆ ಬೀಜದ ಉತ್ಪಾದನೆಯನ್ನು ಪ್ರೋತ್ಸಾಹಿಸಲು ದ್ವಿದಳಧಾನ್ಯ ಬೆಳೆಗಳಲ್ಲಿ ಪ್ರತಿ ಕ್ವಿಂಟಾಲಿಗೆ ರೂ.5000/- ಮತ್ತು ಸಿರಿಧಾನ್ಯಗಳಿಗೆ ರೂ.3000/- ಪ್ರೋತ್ಸಾಹ ಧನ ನೀಡಲಾಗುತ್ತದೆ.

2) **ಬಿತ್ತನೆ ಬೀಜಗಳ ಪೂರೈಕೆ:** ಈ ಯೋಜನೆಯಡಿ ಸಾಮಾನ್ಯ ವರ್ಗದ ರೈತರಿಗೆ ಶೇ. 50 ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75 ರ ರಿಯಾಯಿತಿ ದರದಲ್ಲಿ ಭತ್ತ, ರಾಗಿ, ಜೋಳ, ಮುಸುಕಿನ ಜೋಳ, ಸಜ್ಜೆ, ತೊಗರಿ, ಕಡಲೆ, ಹೆಸರು, ಉದ್ದು, ಅಲಸಂದೆ, ನೆಲಗಡಲೆ, ಸೂರ್ಯಕಾಂತಿ, ಸೋಯಾ ಅವರೆ, ಹತ್ತಿ ಇತ್ಯಾದಿ ಬೆಳೆಗಳ ಪ್ರಮಾಣಿತ/ ನಿಜ ಚೀಟಿ ಬಿತ್ತನೆ ಬೀಜಗಳನ್ನು ವಿತರಣೆ ಮಾಡಲಾಗುವುದು

3) **ಸಸ್ಯ ಸಂರಕ್ಷಣೆ:** ವೈಜ್ಞಾನಿಕ ಧಾನ್ಯ ಸಂಗ್ರಹಣೆಗಾಗಿ ಸುಧಾರಿತ ಪೆಟ್ಟಿಗೆಗಳು, ಜೈವಿಕ ಕೀಡೆನಾಶಕಗಳು, ಸಸ್ಯ ಸಂರಕ್ಷಣಾ ಔಷಧಿಗಳು ಮತ್ತು ಉಪಕರಣಗಳಿಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50 ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75ರ ಸಹಾಯಧನವನ್ನು ನೀಡಲಾಗುತ್ತಿದೆ.

4) **ಮಣ್ಣಿನ ಸತ್ವ ಹೆಚ್ಚಿಸುವಿಕೆ :** ಮಣ್ಣಿನ ಫಲವತ್ತತೆ ಮತ್ತು ಬೆಳೆ ಉತ್ಪಾದಕತೆಯನ್ನು ಹೆಚ್ಚಿಸಲು ಜೈವಿಕ ಗೊಬ್ಬರಗಳು, ಲಘುಪೋಷಕಾಂಶಗಳು, ಜಿಪ್ಸಂ, ಕೃಷಿ ಸುಣ್ಣ/ಡೊಲೋಮೈಟ್, ಹಸಿರೆಲೆ ಗೊಬ್ಬರ ಬೀಜ, ಎರೆಹುಳು ಗೊಬ್ಬರ, ಸಾವಯವ ಗೊಬ್ಬರಗಳನ್ನು ಸಾಮಾನ್ಯ ವರ್ಗದ ರೈತರಿಗೆ ಶೇ.50 ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75ರ ಸಹಾಯಧನದಡಿ ನೀಡುವುದರ ಜೊತೆಗೆ ಬಯೋಡೈಜೆಸ್ಟರ್ ಘಟಕ ಮತ್ತು ಎರೆಹುಳು ಗೊಬ್ಬರ ಉತ್ಪಾದನೆ ಘಟಕ ಸ್ಥಾಪನೆಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50 ಹಾಗೂ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಶೇ.75ರ ಸಹಾಯಧನವನ್ನು ನೀಡಲಾಗುತ್ತಿದೆ

5) **ಕೃಷಿ ಯಾಂತ್ರೀಕರಣ ಮತ್ತು ಕೃಷಿ ಸಂಸ್ಕರಣೆ :** ಈ ಕಾರ್ಯಕ್ರಮದಡಿ ರೈತರಿಗೆ ಸಣ್ಣ ಟ್ರ್ಯಾಕ್ಟರ್, ಪವರ್ ಟಿಲ್ಲರ್, ಭೂಮಿ ಸಿದ್ಧತೆ ಉಪಕರಣಗಳು, ಬಿತ್ತನೆ/ನಾಟಿ ಮಾಡುವ ಉಪಕರಣಗಳು, ಸಸ್ಯ ಸಂರಕ್ಷಣಾ ಉಪಕರಣಗಳು, ಅಂತರ ಬೇಸಾಯ ಉಪಕರಣಗಳು, ತ್ಯಾಜ್ಯ ನಿರ್ವಹಣಾ ಉಪಕರಣಗಳು, ಡೀಸಲ್ ಪಂಪ್‌ಸೆಟ್, ಕಬ್ಬು ಕಟಾವು ಯಂತ್ರ, ಕೊಯ್ಲು ಮತ್ತು ಕೊಯ್ಲೋತ್ತರ ಸಂಸ್ಕರಣಾ ಉಪಕರಣಗಳು, ಕೃಷಿ ಸಂಸ್ಕರಣಾ ಉಪಕರಣಗಳು ಮತ್ತು ಟಾರ್ಪಾಲೀನ್ ಗಳನ್ನು ಸಹಾಯಧನದಡಿ ಒದಗಿಸಲಾಗುತ್ತಿದೆ. ಸಾಮಾನ್ಯ ವರ್ಗದ ರೈತರಿಗೆ ಶೇ.50 ರಷ್ಟು ಸಹಾಯಧನ ಹಾಗೂ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ ರೈತರಿಗೆ ಶೇ.90 ರಷ್ಟು ಸಹಾಯಧನವನ್ನು ಗರಿಷ್ಠ ರೂ.1.00ಲಕ್ಷದ ಮಿತಿಯೊಳಗೆ ನೀಡಲಾಗುತ್ತದೆ.

6) 25ಹೆಚ್ ಪಿ ಸಣ್ಣ ಟ್ರ್ಯಾಕ್ಟರ್ (Upto 25HP PTO) ಗಳಿಗೆ ಸಾಮಾನ್ಯ ವರ್ಗದ ರೈತರಿಗೆ ರೂ. 0.75 ಲಕ್ಷ ಸಹಾಯಧನ ಹಾಗೂ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ ರೈತರಿಗೆ ರೂ.3.00 ಲಕ್ಷ ಸಹಾಯಧನವನ್ನು ನೀಡಲಾಗುತ್ತಿದೆ

7) **ಅನುಸೂಚಿತ ಜಾತಿಗಳ ಉಪಯೋಜನೆ ಮತ್ತು ಬುಡಕಟ್ಟು ಉಪ ಯೋಜನೆ ಕಾಯ್ದೆ 2013ರಡಿ ಬಳಕೆಯಾಗದೆ ಇರುವ ಮೊತ್ತ :** ಈ ಯೋಜನೆಯಡಿ ಪರಿಶಿಷ್ಟ ಜಾತಿ/ ಪಂಗಡದ ರೈತರಿಗೆ ಕೇಂದ್ರ ಸರ್ಕಾರದ ಕೃಷಿ ಯಾಂತ್ರೀಕರಣ ಉಪ ಅಭಿಯಾನದಡಿ ಸಣ್ಣ ಟ್ರ್ಯಾಕ್ಟರ್, ಪವರ್ ಟಿಲ್ಲರ್, ಭೂಮಿ ಸಿದ್ಧತೆ ಉಪಕರಣಗಳು, ಬಿತ್ತನೆ/ನಾಟಿ ಮಾಡುವ ಉಪಕರಣಗಳು, ಸಸ್ಯ ಸಂರಕ್ಷಣಾ ಉಪಕರಣಗಳು, ಅಂತರ ಬೇಸಾಯ ಉಪಕರಣಗಳು, ತ್ಯಾಜ್ಯ ನಿರ್ವಹಣಾ ಉಪಕರಣಗಳು, ಡೀಸಲ್ ಪಂಪ್‌ಸೆಟ್, ಕಬ್ಬು ಕಟಾವು ಯಂತ್ರ, ಕೊಯ್ಲು ಮತ್ತು ಕೊಯ್ಲೋತ್ತರ ಸಂಸ್ಕರಣಾ ಉಪಕರಣಗಳಿಗೆ ಕೇಂದ್ರ ಸರ್ಕಾರವು ನೀಡುವ ಶೇ.50ರ ಸಹಾಯಧನಕ್ಕೆ ಪೂರಕವಾಗಿ ರಾಜ್ಯ ಸರ್ಕಾರದ ಶೇ.40ರ ಸಹಾಯಧನ ಸೇರಿಸಿ ಒಟ್ಟು ಶೇ.90 ರಷ್ಟು ಸಹಾಯಧನವನ್ನು ನೀಡಲಾಗುವುದು

8) **ಮುಖ್ಯಮಂತ್ರಿಯವರ ಸೂಕ್ಷ್ಮ ನೀರಾವರಿ ಯೋಜನೆ:** ಈ ಯೋಜನೆಯಡಿ ರಾಜ್ಯದಲ್ಲಿ ಲಭ್ಯವಿರುವ ನೀರನ್ನು ಸಮರ್ಥ ಮತ್ತು ಸಮರ್ಪಕ ಬಳಕೆಗೆ ಪ್ರೋತ್ಸಾಹಿಸಲು ಹಾಗೂ ಮಿತ ಬಳಕೆಯಿಂದ ಅಧಿಕ ಇಳುವರಿ ಪಡೆಯಲು , ಸೂಕ್ಷ್ಮ (ಹನಿ/ತುಂತುರು) ನೀರಾವರಿ ಪದ್ಧತಿಯ ಅಳವಡಿಕೆಗೆ ಎಲ್ಲಾ ವರ್ಗದ ರೈತರಿಗೆ 2.0 ಹೆಕ್ಟೇರ್ ಪ್ರದೇಶದವರೆಗೆ ಶೇ.90 ರಷ್ಟು ಹಾಗೂ 2.0 ಹೆಕ್ಟೇರಿಗಿಂತ ಮೇಲ್ಪಟ್ಟು 5.0 ಹೆಕ್ಟೇರ್ ಪ್ರದೇಶದವರೆಗೆ ಶೇ.45ರ ಸಹಾಯಧನವನ್ನು ನೀಡಲಾಗುತ್ತಿದೆ.

9) **ಸಾವಯವ ಕೃಷಿ:** ಸಾವಯವ ಭಾಗ್ಯ ಯೋಜನೆಯಡಿ ಸಾವಯವ ಕೃಷಿ ಪದ್ಧತಿಗೆ ಅಳವಡಿಸಿರುವ ಪ್ರದೇಶವನ್ನು ಸಾವಯವ ಗುಂಪು ಪ್ರಮಾಣೀಕರಣಕ್ಕೆ ಒಳಪಡಿಸಲು ಕರ್ನಾಟಕ ರಾಜ್ಯ ಬೀಜ ಮತ್ತು ಸಾವಯವ ಪ್ರಮಾಣನಾ ಸಂಸ್ಥೆ ಮೂಲಕ ಪ್ರಮಾಣೀಕರಣ ಪ್ರದೇಶಕ್ಕನುಗುಣವಾಗಿ ಸಹಾಯಧನ ನೀಡಲಾಗುವುದು.

10)**ರೈತ ಸಿರಿ:** ಈ ಕಾರ್ಯಕ್ರಮದಡಿ ರಾಜ್ಯದಲ್ಲಿ ಸಿರಿಧಾನ್ಯಗಳ ಉತ್ಪಾದನೆಯನ್ನು ಪ್ರೋತ್ಸಾಹಿಸಲು ಮತ್ತು ರೈತರ ಆದಾಯವನ್ನು ಹೆಚ್ಚಿಸಲು ಸಿರಿಧಾನ್ಯಗಳಾದ ನವಣೆ, ಹಾರಕ, ಕೊರಲೆ, ಸಾಮೆ, ಊದಲು ಬೆಳೆಗಳನ್ನು ಬೆಳೆದ ಎಲ್ಲಾ ವರ್ಗದ ರೈತರಿಗೆ ಪ್ರತಿ ಹೆಕ್ಟೇರಿಗೆ ರೂ.10000/-ದಂತೆ ಗರಿಷ್ಠ ಎರಡು ಹೆಕ್ಟೇರುಗಳಿಗೆ ಪ್ರೋತ್ಸಾಹಧನವನ್ನು ನೇರ ನಗದು ವರ್ಗಾವಣೆ ಮೂಲಕ ನೀಡಲಾಗುವುದು. ಪ್ರಸಕ್ತ ಸಾಲಿನಲ್ಲಿ ಕಳೆದ ಸಾಲಿನ ಬಾಕಿ ಪಾವತಿಗೆ ಮಾತ್ರ ಅವಕಾಶ ಕಲ್ಪಿಸಲಾಗಿದೆ.

11) **ಕೃಷಿ ಭಾಗ್ಯ ಯೋಜನೆ:** ಈ ಯೋಜನೆಯಡಿ ನೀರಿನ ಕೊಯ್ಲು ಮತ್ತು ಸಂಗ್ರಹಣೆಗೆ ಕೃಷಿ ಹೊಂಡ ನಿರ್ಮಾಣ ಮಾಡಲು ಸಾಮಾನ್ಯ ವರ್ಗದ ರೈತರಿಗೆ ಶೇ.80 ಹಾಗೂ ಪರಿಶಿಷ್ಟ ಜಾತಿ/ಪಂಗಡದ ರೈತರಿಗೆ ಶೇ.90 ರಷ್ಟು ಸಹಾಯಧನವನ್ನು, ಕೃಷಿ ಹೊಂಡಕ್ಕೆ ಪಾಲಿಥೀನ್ ಹೊದಿಕೆ ಅಳವಡಿಸಲು ಸಾಮಾನ್ಯ ವರ್ಗದ ರೈತರಿಗೆ ಶೇ.80 ಹಾಗೂ ಪರಿಶಿಷ್ಟ ಜಾತಿ/ಪಂಗಡದ ರೈತರಿಗೆ ಶೇ.90 ರಷ್ಟು ಸಹಾಯಧನವನ್ನು(ಗರಿಷ್ಠ ರೂ.50000/), ಹೊಂಡದಿಂದ ನೀರೆತ್ತುವ ಸಲುವಾಗಿ ಡೀಸೆಲ್ ಪಂಪುಸೆಟ್ಟುಗೆ ಸಾಮಾನ್ಯ ವರ್ಗದ ರೈತರಿಗೆ ಶೇ.50 ಹಾಗೂ ಪರಿಶಿಷ್ಟ ಜಾತಿ/ಪಂಗಡದ

ರೈತರಿಗೆ ಶೇ.90 ರಷ್ಟು ಸಹಾಯಧನವನ್ನು ಮತ್ತು ನೀರನ್ನು ಸಮರ್ಪಕವಾಗಿ ಬಳಸಲು ಹನಿ/ತುಂತುರು ನೀರಾವರಿ ಘಟಕಗಳ ಅಳವಡಿಕೆಗೆ ಎಲ್ಲಾ ವರ್ಗದ ರೈತರಿಗೆ ಶೇ.90ರ ಸಹಾಯಧನವನ್ನು, ಹೊಂಡದ ಸುತ್ತ ನೆರಳು ಪರದೆ ಅಳವಡಿಕೆಗೆ ಎಲ್ಲಾ ವರ್ಗದ ರೈತರಿಗೆ ಶೇ.50ರ ಸಹಾಯಧನ ನೀಡಲಾಗುತ್ತದೆ. ಪ್ರಸಕ್ತ ಸಾಲಿನಲ್ಲಿ ಕಳೆದ ಸಾಲಿನ ಬಾಕಿ ಪಾವತಿಗೆ ಮಾತ್ರ ಅವಕಾಶ ಕಲ್ಪಿಸಲಾಗಿದೆ.

12)**ಮಣ್ಣು ಆರೋಗ್ಯ ಕಾರ್ಯಕ್ರಮ:** ಮಣ್ಣು ಆರೋಗ್ಯ ಚೀಟಿ ಶಿಫಾರಸ್ಸಿನ ಅನ್ವಯ ಪ್ರಾತ್ಯಕ್ಷಿಕೆಗಳನ್ನು ಕೈಗೊಳ್ಳಲು ರಿಯಾಯಿತಿ ದರದಲ್ಲಿ ರಸಗೊಬ್ಬರ, ಸಾವಯವ ಗೊಬ್ಬರ, ಜೈವಿಕ ಗೊಬ್ಬರ, ಲಘುಪೋಷಕಾಂಶ ಮಣ್ಣು ಸುಧಾರಕಗಳನ್ನು ಗರಿಷ್ಟ ರೂ.2500/-(ಒಂದು ಹೇಕ್ಟೇರಿಗೆ) ಸಹಾಯಧನ ನೀಡಲಾಗುತ್ತದೆ. ಈ ಕಾರ್ಯಕ್ರಮವನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಮೊದಲು ಮಾದರಿ ಗ್ರಾಮಗಳಲ್ಲಿ ಮಾತ್ರ ಅನುಷ್ಠಾನಗೊಳಿಸಲಾಗುತ್ತಿದೆ. ಇದಲ್ಲದೆ, ಗ್ರಾಮ ಮಟ್ಟದ ಮಣ್ಣು ಪರೀಕ್ಷಾ ಘಟಕಗಳನ್ನು ಸ್ಥಾಪಿಸಲು ಶೇ.75ರ ಸಹಾಯಧನ (ರೂ.3.75ಲಕ್ಷ) ನೀಡಲಾಗುತ್ತಿದೆ.

13)**ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆ:** ಭಾರತ ಸರ್ಕಾರದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ಸಾಗುವಳಿ ಭೂಮಿ ಹೊಂದಿರುವ ಎಲ್ಲಾ ಅರ್ಹ ರೈತರಿಗೆ ವಾರ್ಷಿಕರೂ. 6000/-ಗಳ ನಗದನ್ನು ರೂ.2000/-ಗಳಂತೆ ಮೂರು ಕಂತುಗಳಲ್ಲಿ ನಾಲ್ಕು ತಿಂಗಳಿಗೊಮ್ಮೆ ನೀಡಲಾಗುವುದು. ಕೇಂದ್ರ ಸರ್ಕಾರದ ಪಿ.ಎಂ.ಕಿಸಾನ್ ಯೋಜನೆಯ ಎಲ್ಲಾ ಅರ್ಹ ರೈತರಿಗೆ ದಿನಾಂಕ 14.08.2019 ರಿಂದ ರಾಜ್ಯ ಸರ್ಕಾರವು ಹೆಚ್ಚುವರಿಯಾಗಿ ರೂ.4000/ಗಳನ್ನು ಎರಡು ಕಂತುಗಳಲ್ಲಿ ಆರ್ಥಿಕ ನೆರವನ್ನು ಪಿ.ಎಂ.ಕಿಸಾನ್-ಕರ್ನಾಟಕ ಯೋಜನೆಯಡಿ ನೀಡಲಾಗುತ್ತಿದೆ.

14)**ಕೃಷಿ ಪ್ರಶಸ್ತಿ/ ಕೃಷಿ ಪಂಡಿತ ಪ್ರಶಸ್ತಿ:** ರಾಜ್ಯದ ರೈತರಲ್ಲಿ ಹೆಚ್ಚಿನ ಉತ್ಪಾದನೆ ಮಾಡುವ ಮನೋಭಾವ ಉಂಟು ಮಾಡಲು ರಾಜ್ಯ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಸ್ಪರ್ಧೆಗಳನ್ನು ಏರ್ಪಡಿಸಿ ಬಹುಮಾನಗಳನ್ನು(ಕೃಷಿ ಪ್ರಶಸ್ತಿ) ನೀಡಲಾಗುವುದು. ಕೃಷಿ ಕ್ಷೇತ್ರದಲ್ಲಿ ಅಮೂಲ್ಯ ಅನ್ವೇಷಣೆ ಹಾಗೂ ಸೃಜನಾತ್ಮಕ ಕಾರ್ಯಗಳನ್ನು ಕೈಗೊಂಡ ರೈತರನ್ನು ಗುರುತಿಸಿ ಕೃಷಿ ಪಂಡಿತ ಪ್ರಶಸ್ತಿಯನ್ನು ನೀಡಲಾಗುವುದು.

## ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 328 ರ ಅನುಬಂಧ-2

ಜಲಾನಯನ ಅಭಿವೃದ್ಧಿ ಇಲಾಖೆಯಿಂದ ರೈತರಿಗೆ ಪ್ರಸ್ತುತ ಅನುಷ್ಠಾನಗೊಳಿಸುತ್ತಿರುವ ಯೋಜನೆಗಳು ಹಾಗೂ ಸದರಿ ಯೋಜನೆಗಳ ಸೌಲಭ್ಯಗಳ ವಿವರಗಳು ಕೆಳಕಂಡಂತಿವೆ.

**1.ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ:** ಈ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಕೇಂದ್ರ ಮತ್ತು ರಾಜ್ಯ ಸರ್ಕಾರಗಳು 60:40ರ ಅನುಪಾತದಲ್ಲಿ ಅನುದಾನ ಒದಗಿಸಲಾಗುತ್ತಿದೆ.

**ಅ) ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಜಲಾನಯನ ಅಭಿವೃದ್ಧಿ:** ಈ ಯೋಜನೆ ಮೂಲಕ ಮಣ್ಣು ಮತ್ತು ನೀರು ಸಂರಕ್ಷಣೆಗಾಗಿ ಕಂದಕ ಬದುಗಳು, ಬೋಲ್ಡರ್/ರಬಲ್/ಸಸ್ಯತಡೆಗಳು, ಕೃಷಿ ಹೊಂಡಗಳು, ಚಿಕ್ಕ ತಡೆ ಅಣೆಗಳು, ನಾಲಾಬದುಗಳು, ಖುಷ್ಕಿ ತೋಟಗಾರಿಕೆ, ಕೃಷಿ ಅರಣ್ಯ ಮತ್ತು ಮೇವು ಅಭಿವೃದ್ಧಿ ಮುಂತಾದ ಚಟುವಟಿಕೆಗಳನ್ನು ತಾಂತ್ರಿಕತೆ ಆಧರಿಸಿ ಅನುಷ್ಠಾನ ಮಾಡಲಾಗುತ್ತದೆ. ಈ ಚಟುವಟಿಕೆಗಳಿಂದ ಮಣ್ಣು ಮತ್ತು ನೀರಿನ ಸಂರಕ್ಷಣೆಯಾಗಿ ಬೆಳೆಗಳ ಉತ್ಪಾದಕತೆಯು ಹೆಚ್ಚಾಗುತ್ತದೆ.

ಯೋಜನಾ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳಲ್ಲಿ ಭೂ ರಹಿತ ಮತ್ತು ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ಮಹಿಳೆಯರಿಗಾಗಿ ಸ್ವಸಹಾಯ ಗುಂಪುಗಳನ್ನು ರಚಿಸಲಾಗುತ್ತದೆ. ಸ್ವಸಹಾಯ ಗುಂಪಿನ ಸದಸ್ಯರಿಗೆ ಅಗತ್ಯ ತರಬೇತಿಗಳನ್ನು ನೀಡಿ ಆದಾಯ ಉತ್ಪನ್ನ ಚಟುವಟಿಕೆಗಳನ್ನು ಕೈಗೊಳ್ಳಲು ಸುತ್ತು ನಿಧಿಯನ್ನು ನೀಡಿ ಪ್ರೋತ್ಸಾಹ ನೀಡಲಾಗುತ್ತಿದೆ.

ಆ) **ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ-ಇತರೆ ಉಪಚಾರಗಳು:** ಈ ಯೋಜನೆಯಡಿ ಸಮುದಾಯ ನೀರು ಸಂಗ್ರಹಣಾ ವಿನ್ಯಾಸಗಳಾದ ತಡೆಅಣೆ, ನಾಲಾಬದು, ಕಿಂಡಿ ಅಣೆ, ಜಿನುಗುಕೆರೆ ಮತ್ತಿತರ ನೀರು ಸಂಗ್ರಹಣಾ ವಿನ್ಯಾಸಗಳನ್ನು ರಚಿಸಿ, ಸದರಿ ವಿನ್ಯಾಸಗಳನ್ನು ಸೂಕ್ಷ್ಮ ನೀರಾವರಿಗೆ ಅಳವಡಿಸುವುದರ ಮೂಲಕ ಬೆಳೆಗಳ ಸಂದಿಗ್ಧ ಪರಿಸ್ಥಿತಿಯಲ್ಲಿ ರಕ್ಷಣಾತ್ಮಕ ನೀರಾವರಿಗೆ ನೀರನ್ನು ಬಳಸಿ ಕೃಷಿ ಉತ್ಪನ್ನಗಳನ್ನು ಹೆಚ್ಚಿಸಲು ನೆರವಾಗುತ್ತದೆ.

**2. ರಾಷ್ಟ್ರೀಯ ಸುಸ್ಥಿರ ಕೃಷಿ ಅಭಿಯಾನ-ಮಳೆಯಾಶ್ರಿತ ಪ್ರದೇಶಾಭಿವೃದ್ಧಿ ಕಾರ್ಯಕ್ರಮ: NMSA-RAD** ಕಾರ್ಯಕ್ರಮವನ್ನು ಮಳೆಯಾಶ್ರಿತ ಪ್ರದೇಶಗಳಲ್ಲಿ ಕನಿಷ್ಠ 100 ಹೆಕ್ಟೇರ್ ಪ್ರದೇಶದಲ್ಲಿ ಆಯ್ದ ಗುಚ್ಛ ಗ್ರಾಮಗಳಲ್ಲಿ ಅನುಷ್ಠಾನಗೊಳಿಸಲಾಗಿದೆ. ಈ ಕಾರ್ಯಕ್ರಮದಡಿ ಮಳೆಯಾಶ್ರಿತ ಪ್ರದೇಶಗಳಲ್ಲಿ ಸಮಗ್ರ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳಲು ಪ್ರೋತ್ಸಾಹ ನೀಡುತ್ತದೆ. ಕೃಷಿ, ತೋಟಗಾರಿಕೆ, ಪಶು ಸಂಗೋಪನೆ, ಕೃಷಿ ಅರಣ್ಯ ಆಧಾರಿತ ಮಿಶ್ರ ಬೆಳೆ ಪದ್ಧತಿಗಳನ್ನು ಒಬ್ಬ ಫಲಾನುಭವಿಗೆ ಗರಿಷ್ಠ 2 ಹೆಕ್ಟೇರ್ ಪ್ರದೇಶ ಮೀರದಂತೆ ಅನುಷ್ಠಾನಗೊಳಿಸಲಾಗಿದೆ. . ಇದರೊಂದಿಗೆ ಮೌಲ್ಯವರ್ಧಿತ ಚಟುವಟಿಕೆಗಳಾದ ಜೇನು ಸಾಕಾಣಿಕೆ, ಸೈಲೇಜ್ ಗುಂಡಿ, ಸಮುದಾಯ ಕೆರೆ, ನೀರು ಎತ್ತುವ ಯಂತ್ರಗಳು, ಎರೆಹುಳು ಸಾಕಾಣಿಕೆ, ನೀರು ಸಂರಕ್ಷಣಾ ಕಾಮಗಾರಿಗಳಾದ ಬದು ನಿರ್ಮಾಣ, ಕೃಷಿ ಹೊಂಡ ಹಾಗೂ ಇತರೆ ಚಟುವಟಿಕೆಗಳನ್ನು ಕೈಗೊಳ್ಳಲಾಗಿದೆ. ಈ ಎಲ್ಲಾ ಚಟುವಟಿಕೆಗಳಿಂದ ರೈತನ ಆದಾಯದಲ್ಲಿ ಸುಸ್ಥಿರತೆ ತರಲು ಸಾಧ್ಯವಾಗುತ್ತದೆ.

**3. ಅ) ಸಮಸ್ಯಾತ್ಮಕ ಮಣ್ಣುಗಳ ಸುಧಾರಣೆ(RPS):** ನಿರ್ದಿಷ್ಟ ಅಗತ್ಯತೆ ಮತ್ತು ಸ್ಥಳಕ್ಕನುಗುಣವಾಗಿ ಕೃಷಿ ಅಭಿವೃದ್ಧಿ, ವೈಜ್ಞಾನಿಕ ಇಂಜಿನಿಯರಿಂಗ್ ಕ್ರಮಗಳು, ವೈಜ್ಞಾನಿಕವಾಗಿ ರಸಗೊಬ್ಬರಗಳ ಬಳಕೆ, ಉಪ್ಪು ಸಹಿಷ್ಣು ಬೆಳೆ/ಕೃಷಿ ಅರಣ್ಯೀಕರಣ ಪದ್ಧತಿಗಳನ್ನು ಅಳವಡಿಸಿ ಸಮಸ್ಯಾತ್ಮಕ ಮಣ್ಣುಗಳ ಸುಧಾರಣೆ/ಅಭಿವೃದ್ಧಿ ಮೂಲಕ ಬೆಳೆ ಇಳುವರಿ ಹೆಚ್ಚಿಸುವುದು.

**ಆ) ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಸಮಗ್ರ ಕೃಷಿ ಅಭಿವೃದ್ಧಿ (PPP-IAD):** ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿಯಲ್ಲಿ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ಕೃಷಿಯ ಉತ್ಪಾದನೆಯಿಂದ ಹಿಡಿದು ಬಳಕೆಯ ಹಂತದವರೆಗೂ ಸಂಪೂರ್ಣ ಮೌಲ್ಯವೃದ್ಧಿ ಸರಪಳಿಯನ್ನು ಸೂಕ್ತ ಮಧ್ಯಸ್ಥಿಕೆ /ತಾಂತ್ರಿಕತೆಗಳನ್ನು ಅಳವಡಿಸಿಕೊಳ್ಳುವುದರ ಮೂಲಕ ಕೃಷಿಯಲ್ಲಿ ಉತ್ಪಾದಕತೆಯನ್ನು ಹೆಚ್ಚಿಸುವುದು

ಹಾಗೂ ಕೊಯ್ಲೋತ್ತರ ನಷ್ಟವನ್ನು ಕಡಿಮೆಗೊಳಿಸುವುದು ಈ ಯೋಜನೆಯ ಉದ್ದೇಶವಾಗಿರುತ್ತದೆ. ಈ ಯೋಜನೆಯಿಂದ ರೈತರಿಗೆ ನೇರ ಮಾರುಕಟ್ಟೆ ಬೆಂಬಲವನ್ನು ನೀಡುವುದರ ಮೂಲಕ ಮಧ್ಯವರ್ತಿಗಳ ಹಾವಳಿಯನ್ನು ತಪ್ಪಿಸುವುದಲ್ಲದೆ, ರೈತರು ಉತ್ಪಾದಿಸುವ ಬೆಳೆಗೆ ಸೂಕ್ತ ಬೆಲೆಯನ್ನು ದೊರಕಿಸಿಕೊಡಲು ಸಹಾಯವಾಗುವುದು.

**ಇ)ರೈತ ಉತ್ಪಾದಕರ ಸಂಸ್ಥೆ (FPO):** ರೈತ ಉತ್ಪಾದಕರ ಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಸಣ್ಣ ಹಾಗೂ ಅತಿ ಸಣ್ಣ ರೈತರು ತಮ್ಮ ಉತ್ಪನ್ನಗಳನ್ನು ಮಾರುಕಟ್ಟೆ ಮಾಡುವಲ್ಲಿ ಒಬ್ಬಂಟಿಯಾಗಿ ಎದುರಿಸುವ ಹಲವಾರು ಸವಾಲುಗಳನ್ನು ಪರಿಹರಿಸಬಹುದು. ಉತ್ಪಾದಕರ ಸಂಸ್ಥೆಯಾಗಿ ರೈತ ಉತ್ಪಾದಕರ ಸಂಘವು ಸ್ಥಳೀಯ ರೈತ ಸಮುದಾಯದ ಸಂಧಾನ ಸಾಮರ್ಥ್ಯವನ್ನು ಹಾಗೂ ವ್ಯವಹಾರಿಕ ಪಾಲುದಾರಿಕೆಯನ್ನು ಅಭಿವೃದ್ಧಿಗೊಳಿಸುವ ಮೂಲಕ ರೈತರ ಆರ್ಥಿಕ ಹಾಗೂ ಔದ್ಯಮಿಕ ಸಂಭಾವ್ಯ ಶಕ್ತಿಯನ್ನು ಸಡಿಲಿಸುವಂತೆ ಮಾಡಬಹುದಾಗಿದೆ. ಈ ಸಂಸ್ಥೆಗಳಿಂದ ಉತ್ಪಾದಕರ ಬೇಡಿಕೆಗೆ ಅನುಗುಣವಾಗಿ ಹಾಗೂ ಮೌಲ್ಯ ಸರಪಳಿಯ ಪದ್ಧತಿಯನ್ನು ಅಳವಡಿಸುವ ಮೂಲಕ ಉತ್ಪಾದಕರ ಆರ್ಥಿಕ ಹಾಗೂ ಸಾಮಾಜಿಕ ಲಾಭಗಳನ್ನು ಹೆಚ್ಚಿಸುವ ಉದ್ದೇಶವನ್ನು ಹೊಂದಿದೆ.

**4. ಜಲಾನಯನ ಅಭಿವೃದ್ಧಿ ಮೂಲಕ ಬರಗಾಲ ತಡೆಯುವಿಕೆ :** 2019-20 ನೇ ಸಾಲಿನಿಂದ ರಾಜ್ಯದ 100 ಬರಪೀಡಿತ ಮತ್ತು ಅಂತರ್ಜಲ ಶೋಷಿತ ತಾಲ್ಲೂಕುಗಳಲ್ಲಿ ಭೂಸಂಪನ್ಮೂಲ ಸಮೀಕ್ಷೆ ಮಾಹಿತಿ ಆಧರಿಸಿ ಹಾಗೂ MGNREGA ಮತ್ತು PMKSY ಯೋಜನೆಗಳೊಂದಿಗೆ ಒಗ್ಗೂಡಿಸಿ ಬರನಿರೋಧಕ ಜಲಾನಯನ ಚಟುವಟಿಕೆಗಳ ಅನುಷ್ಠಾನದ ಮೂಲಕ ಮಳೆಯಾಶ್ರಿತ ಜಲಾನಯನ ಪ್ರದೇಶದ ಉತ್ಪಾದಕತೆಯನ್ನು ಹೆಚ್ಚಿಸುವುದು ಹಾಗೂ ಆಸ್ತಿರಹಿತರಿಗೆ ಜೀವನೋಪಾಯ ಚಟುವಟಿಕೆಗಳನ್ನು ಅನುಷ್ಠಾನ ಮಾಡಲು ನೆರವು ನೀಡಲು ಸಹಾಯವಾಗುವುದು.

****